ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ, ಬಳ್ಳಾರಿ

"ಜ್ಞಾನ ಸಾಗರ" ಆವರಣ, ಬಳ್ಳಾರಿ - 583 105, ಕರ್ನಾಟಕ

Vijayanagara Sri Krishnadevaraya University, Ballari

"Jnana Sagara" Campus, Ballari - 583 105, Karnataka

Website : vskub.ac.in

Prof. M. Muniraju,
M.Com, M.Phil, Ph.D
Vice-Chancellor

ಪ್ರೊ. ಎಂ. ಮುನಿರಾಜು,
ಎಂ.ಕಾಂ, ಎಂ.ಫಿಲ್., ಪಿಎಚ್.ಡಿ
ಕುಲಪತಿಗಳು

ಸಂ:ವಿಶ್ರೀಕೃವಿಬ/ವಿಸಿಪಿಎಸ್/2024–25/ 137 ದಿನಾಂಕ:21.09.2024

ಪ್ರೊ. ಕೆ.ವಿ.ಪ್ರಸಾದ್, ಪ್ರೊ. ಹನುಮೇಶ್ ವೈದ್ಯ ಹಾಗೂ ಡಾ. ಅಶ್ವಿನ್‌ಕುಮಾರ್ ರವರಿಗೆ,

ವಿಶ್ವದ ಪ್ರತಿಷ್ಠಿತ ಅಮೇರಿಕಾದ ಸ್ಟ್ಯಾನ್‌ಫೋರ್ಡ್ ವಿಶ್ವವಿದ್ಯಾಲಯ ವಾರ್ಷಿಕವಾಗಿ ಪ್ರಕಟಿಸುವ ಜಗತ್ತಿನ ಖ್ಯಾತ ವಿಜ್ಞಾನಿಗಳ ಪಟ್ಟಿಯಲ್ಲಿ ಸತತ ಎರಡನೇ ಬಾರಿ ಸ್ಥಾನ ಪಡೆದಿರುವ ಪ್ರೊ. ಕೆ.ವಿ. ಪ್ರಸಾದ್, ಹಿರಿಯ ಪ್ರಾಧ್ಯಾಪಕರು, ಗಣಿತಶಾಸ್ತ್ರ ಅಧ್ಯಯನ ವಿಭಾಗ, ಪ್ರೊ. ಹನುಮೇಶ್ ವೈದ್ಯ, ಪ್ರಾಧ್ಯಾಪಕರು ಹಾಗೂ ಮುಖ್ಯಸ್ಥರು, ಗಣಿತಶಾಸ್ತ್ರ ಅಧ್ಯಯನ ವಿಭಾಗ ಮತ್ತು ಮೊದಲ ಬಾರಿಗೆ ಸ್ಥಾನ ಪಡೆದಿರುವ ಡಾ.ಅಶ್ವಿನ್‌ಕುಮಾರ್, ಸಹಾಯಕ ಪ್ರಾಧ್ಯಾಪಕರು, ಗಣಿತಶಾಸ್ತ್ರ ಅಧ್ಯಯನ ವಿಭಾಗ ಇವರುಗಳಿಗೆ ವಿಶ್ವವಿದ್ಯಾಲಯದ ವತಿಯಿಂದ ಹಾಗೂ ವೈಯಕ್ತಿಕವಾಗಿ ತುಂಬು ಹೃದಯದ ಅಭಿನಂದನೆಗಳನ್ನು ಸಲ್ಲಿಸುತ್ತಿದ್ದೇನೆ.

ವಿಶ್ವದರ್ಜೆಯ ಗುಣಮಟ್ಟದ ಸಂಶೋಧನಾ ಲೇಖನಗಳನ್ನು ವೆಬ್ ಆಫ್ ಸೈನ್ಸ್, ಸ್ಕೋಪಸ್, ಗೂಗಲ್ ಸ್ಕಾಲರ್, ಹೆಚ್ ಇಂಡೆಕ್ಸ್, ಇಂಪ್ಯಾಕ್ಟ್ ಫ್ಯಾಕ್ಟರ್, ಸೈಟೇಷನ್ ಹೀಗೆ ಹಲವಾರು ಸಂಯೋಜಿತ ಮಾನದಂಡಗಳನ್ನು ಆಧರಿಸಿ ಪ್ರಪಂಚದ ಒಟ್ಟು ಸಂಶೋಧನಾಕಾರರಲ್ಲಿ ಶೇ.2 ರಷ್ಟು ಖ್ಯಾತನಾಮ ವಿಜ್ಞಾನಿಗಳನ್ನು ಸಂಶೋಧನೆಗೆ ಸಂಬಂಧಿಸಿದ ವಿವಿಧ ವರ್ಗಗಳಲ್ಲಿ ವಿಂಗಡಿಸಿ ಸ್ಟ್ಯಾನ್‌ಫೋರ್ಡ್ ವಿಶ್ವವಿದ್ಯಾಲಯವು ಬಿಡುಗಡೆ ಮಾಡಿದ ಪಟ್ಟಿಯಲ್ಲಿ ತಾವುಗಳು ಸ್ಥಾನ ಪಡೆದಿರುವುದು ತುಂಬಾ ಸಂತೋಷದ ವಿಷಯವಾಗಿದೆ. ವಿಶ್ವವಿದ್ಯಾಲಯವು ತಮಗೆ ಯಾವಾಗಲೂ ಬೆಂಬಲವಾಗಿರುತ್ತದೆ ಎಂದು ತಿಳಿಸಲು ಹರ್ಷಿಸುತ್ತೇನೆ.

(ಪ್ರೊ. ಎಂ. ಮುನಿರಾಜು) 21/9/24
ಕುಲಪತಿಗಳು

ಗೆ,

ಪ್ರೊ.ಕೆ.ವಿ.ಪ್ರಸಾದ್,
ಹಿರಿಯ ಪ್ರಾಧ್ಯಾಪಕರು, ಗಣಿತಶಾಸ್ತ್ರ ಅಧ್ಯಯನ ವಿಭಾಗ,
ವಿಶ್ರೀಕೃ ವಿಶ್ವವಿದ್ಯಾಲಯ, ಬಳ್ಳಾರಿ.
ಹಾಗೂ ಕುಲಸಚಿವರು (ಮೌಲ್ಯಮಾಪನ),
ಕೊಪ್ಪಳ ವಿಶ್ವವಿದ್ಯಾಲಯ, ಕೊಪ್ಪಳ.

ಪ್ರೊ.ಹನುಮೇಶ್ ವೈದ್ಯ,
ಪ್ರಾಧ್ಯಾಪಕರು, ಗಣಿತಶಾಸ್ತ್ರ ಅಧ್ಯಯನ ವಿಭಾಗ
ಹಾಗೂ ಮುಖ್ಯಸ್ಥರು, ಗಣಿತಶಾಸ್ತ್ರ ಅಧ್ಯಯನ ವಿಭಾಗ
ವಿಶ್ರೀಕೃ ವಿಶ್ವವಿದ್ಯಾಲಯ, ಬಳ್ಳಾರಿ.

ಡಾ. ಅಶ್ವಿನ್‌ಕುಮಾರ್
ಸಹಾಯಕ ಪ್ರಾಧ್ಯಾಪಕರು, ಗಣಿತಶಾಸ್ತ್ರ ಅಧ್ಯಯನ ವಿಭಾಗ
ಸ್ನಾತಕೋತ್ತರ ಕೇಂದ್ರ, ಯಲಬುರ್ಗಾ, ವಿಶ್ರೀಕೃ ವಿಶ್ವವಿದ್ಯಾಲಯ, ಬಳ್ಳಾರಿ.